# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 465 (481)<br>(ಆರ್ಥಿಕ ಇಲಾಖೆಯಿಂದ ವರ್ಗಾವಣೆಗೊಂಡಿರುವ) |
| ಸದಸ್ಯರ ಹೆಸರು | : | ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 14.08.2025 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಬೋಧಕೇತರ ವೃಂದಗಳಲ್ಲಿ (ಗ್ರೂಪ್ 'ಸಿ' ಮತ್ತು 'ಡಿ') ಸರ್ಕಾರದಿಂದ ಮಂಜೂರಾಗಿರುವ ಸುಮಾರು 3500 ಅನುದಾನಿತ ಹುದ್ದೆಗಳಲ್ಲಿ ಸುಮಾರು 1700 ಹುದ್ದೆಗಳು ಖಾಲಿಯಿದ್ದು ಅನುದಾನಿತ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಶಿಕ್ಷಣ ಸಂಸ್ಥೆಗಳಲ್ಲಿ ಬೋಧಕೇತರ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅವಕಾಶ ಕಲ್ಪಿಸಿರುವುದಿಲ್ಲ ಅನುದಾನಿತ ಸಂಸ್ಥೆಗಳಲ್ಲಿ ಬೋಧಕ ವೃಂದದ ಹುದ್ದೆಗಳನ್ನು ಮಾತ್ರ ಭರ್ತಿ ಮಾಡಲು ಅನುಮತಿ ನೀಡಲಾಗುತ್ತಿದ್ದು ಹಲವಾರು ವರ್ಷಗಳಿಂದ ಬೋಧಕೇತರ ವೃಂದಗಳಲ್ಲಿ ತೆರವಾಗುವ ಹುದ್ದೆಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಹೊರತುಪಡಿಸಿ ಸಾಮಾನ್ಯ ವರ್ಗದ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಅನುಮತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು.<br>ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಬಂದಿದ್ದಲ್ಲಿ, ಬಹುಪಾಲು ಅನುದಾನಿತ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಶಿಕ್ಷಣ ಸಂಸ್ಥೆಗಳು ಹಿಂದುಳಿದ ಗ್ರಾಮೀಣ ಪ್ರದೇಶದಲ್ಲಿದ್ದು ಈ ಸಂಸ್ಥೆಗಳಿಗೆ ಶೇ.100 ರಷ್ಟು ಸೀಟುಗಳನ್ನು ಸರ್ಕಾರಿ ಕೋಟಾದಲ್ಲಿಯೇ ಭರ್ತಿ ಮಾಡಲಾಗುತ್ತಿರುವುದರಿಂದ ಈ ಸಂಸ್ಥೆಗಳಿಗೆ ಬೇರೆ ಯಾವುದೇ ಆದಾಯದ ಮೂಲವಿಲ್ಲದ ಕಾರಣ ಆಡಳಿತ ಮಂಡಳಿಯಿಂದ ಖಾಲಿಯಿರುವ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಂಡು ವೇತನ ಪಾವತಿಸಲು ಮತ್ತು ಅನುದಾನಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಪ್ರಾಯೋಗಿಕ ತರಗತಿ ಯಂತ್ರೋಪಕರಣಗಳ ನಿರ್ವಹಣೆ ಮಾಡಲು ಕಛೇರಿ ಕಾರ್ಯಗಳನ್ನು | ಸರ್ಕಾರದ ಆದೇಶ ಸಂಖ್ಯೆ: ಇಡಿ 196 ಯುಪಿಸಿ 2000 (ಭಾಗ), ದಿನಾಂಕ: 01.03.2001 ಹಾಗೂ 13.09.2002 ಗಳಲ್ಲಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿನ ಬೋಧಕ ಮತ್ತು ಬೋಧಕೇತರ ಹುದ್ದೆಗಳಲ್ಲಿ ನಿವೃತ್ತಿ, ನಿಧನ ಮತ್ತು ರಾಜಿನಾಮೆಯಿಂದ ತೆರವಾಗುವ ಹುದ್ದೆಗಳ ಪೈಕಿ ನಿಗದಿತ ಕಾರ್ಯಭಾರವಿರುವ ಬೋಧಕ ಹುದ್ದೆಗಳನ್ನು ಮಾತ್ರ ಭರ್ತಿ ಮಾಡಲು ಅನುಮತಿ ನೀಡಲಾಗಿದ್ದು, ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಿರುವುದಿಲ್ಲ.<br><br>ಮುಂದುವರಿದು, ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 137 ಈಕಾಅ 2005, ದಿನಾಂಕ: 26.07.2005 ಮತ್ತು ಆಇ 02 ಬಿಇಎಂ 2024, |

| | | |
|---|---|---|
| | ಸಮರ್ಪಕವಾಗಿ ನಿರ್ವಹಿಸಲು ಈ ಭಾಗದ ವಿದ್ಯಾರ್ಥಿಗಳು ಗುಣಮಟ್ಟದ ತಾಂತ್ರಿಕ ಶಿಕ್ಷಣ ನೀಡಲು ಖಾಲಿ ಇರುವ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು) | ದಿನಾಂಕಃ 07.06.2024 ರಲ್ಲಿ ಗ್ರೂಪ್ 'ಸಿ' ಹುದ್ದೆಗಳಾದ ಶೀಘ್ರಲಿಪಿಗಾರರು, ದತ್ತಾಂಶ ನಮೂದು ಸಹಾಯಕರು ಮತ್ತು ವಾಹನ ಚಾಲಕರ ಹುದ್ದೆಗಳನ್ನು ಹಾಗೂ ಗ್ರೂಪ್ 'ಡಿ' ಮತ್ತು ಸಮಾನಾಂತರ ಹುದ್ದೆಗಳನ್ನು ಸರ್ಕಾರದ ಇಲಾಖೆಗಳಲ್ಲಿ ಹಾಗೂ ಸರ್ಕಾರದ ಸಂಸ್ಥೆಗಳಲ್ಲಿ ಮಾತ್ರ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಆದರೆ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ ವೇತನಾನುದಾನವನ್ನು (Salary grants) ಮಾತ್ರ ನೀಡುತ್ತಿದ್ದು ಹೊರಗುತ್ತಿಗೆ ಆಧಾರದ ಮೇಲೆ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಿರುವುದಿಲ್ಲ. |

**ಸಂಖ್ಯೆ: ಇಡಿ 73 ಟಿಜಿಎಲ್ 2025**

(ಡಾ:ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು